416

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 873(978)

ಮಾನ್ಯ ಸದಸ್ಯರ ಹೆಸರು : ಡಾ|| ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 14.12.2023

ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸರ್ಕಾರಿ ನೌಕರರಿಗೆ ಹಾಗೂ ಶಿಕ್ಷಕರಿಗೆ ಹೊಸ ಪಿಂಚಣಿ (ಎನ್.ಪಿ.ಎಸ್) ವ್ಯವಸ್ಥೆ ಅನುಷ್ಠಾನಗೊಳಿಸಿರುವುದು ಯಾವಾಗ; ಈ ವ್ಯವಸ್ಥೆಯಿಂದ ಸದರಿ ನೌಕರರಿಗೆ ಆಗುವ ಪ್ರಯೋಜನೆಗಳೇನು; | ಸರ್ಕಾರದ ಆದೇಶ ಸಂಖ್ಯೆ: ಆಇ (ಎಸ್.ಪಿ.ಎಲ್.) 04 ಪಿಇಟಿ 2005, ದಿನಾಂಕ:31.03.2006 ರನ್ವಯ ದಿನಾಂಕ:01.04.2006 ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುತ್ತದೆ.<br><br>ರಾಜ್ಯದ ಸ್ವಾಯತ್ತ ಸಂಸ್ಥೆಗಳು, ನಿಗಮ-ಮಂಡಳಿಗಳು, ಸಂಘಗಳು, ವಿಶ್ವವಿದ್ಯಾನಿಲಯಗಳು, ರಾಜ್ಯದ ಅನುದಾನಿತ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೂ ಸಹ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ: 01.04.2006 ರಿಂದ ಕಡ್ಡಾಯವಾಗಿ ಜಾರಿಗೆ ಬರುವಂತೆ ಸರ್ಕಾರದ ಸುತ್ತೋಲೆ ಸಂಖ್ಯೆ: ಆಇ (ವಿ) 209 ಪಿಇಎನ್ 2012, ದಿನಾಂಕ: 21.02.2015ರಲ್ಲಿ ವಿಸ್ತರಿಸಲಾಗಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಎಫ್.ಡಿ. (ಎಸ್.ಪಿ.ಎಲ್.) 203 ಪಿಇಎನ್ 2012 (ಪಿ), ದಿನಾಂಕ: 18.05.2016 ಮತ್ತು ಸರ್ಕಾರದ ಆದೇಶ ಸಂ:ಆಇ 201 ಪಿಇಎನ್ 2021 ದಿನಾಂಕ:29.11.2021ರನ್ವಯ ರಾಷ್ಟ್ರೀಯ ಪಿಂಚಣಿ ಯೋಜನೆಯಡಿ ನೌಕರರು ನಿವೃತ್ತರಾದರೆ/ಸೇವೆಯಲ್ಲಿರುವಾಗಲೇ ಮೃತರಾದರೆ/ರಾಜೀನಾಮೆ ನೀಡಿದ ಸಂದರ್ಭದಲ್ಲಿ ಅವರುಗಳ ಪ್ರಾನ್ ಖಾತೆಯಲ್ಲಿನ ಮೊತ್ತವನ್ನು ಈ ಕೆಳಕಂಡಂತೆ ಇತ್ಯರ್ಥಪಡಿಸಲಾಗುವುದು.<br><br>a) ರಾಷ್ಟ್ರೀಯ ಪಿಂಚಣಿ ಯೋಜನೆಯಡಿ ನಿವೃತ್ತಿ ಹೊಂದಿದ ನೌಕರರ ಪ್ರಾನ್ ಖಾತೆಯಲ್ಲಿ ರೂ. 5.00 ಲಕ್ಷಕ್ಕಿಂತ ಕಡಿಮೆ ಮೊತ್ತವಿದ್ದರೆ ನೌಕರರಿಗೆ ಪ್ರಾನ್ ಖಾತೆಯಲ್ಲಿರುವ ಸಂಪೂರ್ಣ ಮೊತ್ತವನ್ನು ಇತ್ಯರ್ಥಪಡಿಸಲಾಗುವುದು ಹಾಗೂ ಪ್ರಾನ್ ಖಾತೆಯಲ್ಲಿನ ಮೊತ್ತವು ರೂ. 5.00 ಲಕ್ಷಕ್ಕಿಂತ ಮೇಲ್ಪಟ್ಟಿದ್ದರೆ ಪ್ರಾನ್ ಖಾತೆಯಲ್ಲಿರುವ 60% ಮೊತ್ತವನ್ನು ನೌಕರರು ಹಿಂಪಡೆಯಬಹುದಾಗಿದ್ದು ಉಳಿದ 40% ಮೊತ್ತವನ್ನು ಕಡ್ಡಾಯವಾಗಿ Annuity Service Provider ಯಲ್ಲಿ ಹೂಡಿಕೆ ಮಾಡಿ ಮಾಸಿಕ ಪಿಂಚಣಿ ಪಡೆಯಬೇಕಿರುತ್ತದೆ.<br><br>b) ರಾಷ್ಟ್ರೀಯ ಪಿಂಚಣಿ ಯೋಜನೆಯಡಿ ಸೇವೆಗೆ ರಾಜೀನಾಮೆ ನೀಡಿದ ನೌಕರರ ಪ್ರಾನ್ ಖಾತೆಯಲ್ಲಿ ರೂ. 2.50 ಲಕ್ಷಕ್ಕಿಂತ ಕಡಿಮೆ ಮೊತ್ತವಿದ್ದರೆ ನೌಕರರ |

| | | |
|---|---|---|
| | | ಪ್ರಾನ್ ಖಾತೆಯಲ್ಲಿನ ಸಂಪೂರ್ಣ ಮೊತ್ತವನ್ನು ಇತ್ಯರ್ಥಪಡಿಸಲಾಗುವುದು. ನೌಕರರ ಪ್ರಾನ್ ಖಾತೆಯಲ್ಲಿನ ಮೊತ್ತವು ರೂ. 2.50 ಲಕ್ಷಕ್ಕಿಂತ ಮೇಲ್ಪಟ್ಟಿದ್ದರೆ ಶೇ.20% ರಷ್ಟು ಮೊತ್ತವನ್ನು ನೌಕರರು ಹಿಂಪಡೆಯಬಹುದಾಗಿದ್ದು, ಉಳಿಕೆ ಶೇ. 80% ಮೊತ್ತವನ್ನು ಕಡ್ಡಾಯವಾಗಿ Annuity Service Provider ಯಲ್ಲಿ ಹೂಡಿಕೆ ಮಾಡಿ ಮಾಸಿಕ ಪಿಂಚಣಿ ಪಡೆಯಬೇಕಿರುತ್ತದೆ.<br><br>c) ನೌಕರರು ಸೇವೆಯಲ್ಲಿರುವಾಗಲೇ ಮೃತರಾದ ಸಂದರ್ಭದಲ್ಲಿ ಪ್ರಾನ್ ಖಾತೆಯಲ್ಲಿ ರೂ. 5.00 ಲಕ್ಷಕ್ಕಿಂತ ಕಡಿಮೆ ಮೊತ್ತವಿದ್ದರೆ, ಮೃತರ ನಾಮನಿರ್ದೇಶಿತರಿಗೆ ಸಂಪೂರ್ಣ ಮೊತ್ತವನ್ನು ಇತ್ಯರ್ಥಪಡಿಸಲಾಗುವುದು. ಪ್ರಾನ್ ಖಾತೆಯಲ್ಲಿನ ಮೊತ್ತವು 5.00 ಲಕ್ಷಕ್ಕಿಂತ ಮೇಲ್ಪಟ್ಟಿದ್ದರೆ ಪ್ರಾನ್ ಖಾತೆಯಲ್ಲಿರುವ 20% ರಷ್ಟು ಮೊತ್ತವನ್ನು ಮೃತರ ನಾಮನಿರ್ದೇಶಿತರಿಗೆ ಇತ್ಯರ್ಥಪಡಿಸಲಾಗುವುದು ಹಾಗೂ 80% ರಷ್ಟು ಮೊತ್ತವು ಕಡ್ಡಾಯವಾಗಿ Annuity Service Provider ಯಲ್ಲಿ ಹೂಡಿಕೆ ಮಾಡಿ ಮಾಸಿಕ ಪಿಂಚಣಿ ಪಡೆಯಬೇಕಿರುತ್ತದೆ. |
| ಆ) | ಹಳೇ ಪಿಂಚಣಿ (ಒ.ಪಿ.ಎಸ್) ಯೋಜನೆಯಿಂದ ಸರ್ಕಾರಿ ನೌಕರರಿಗೆ ಹಾಗೂ ಶಿಕ್ಷಕರಿಗೆ ದೊಡ್ಡ ಪ್ರಮಾಣದಲ್ಲಿ ಆರ್ಥಿಕ ನಷ್ಟವುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ವಿವರಗಳನ್ನು ನೀಡುವುದು; | ಇಲ್ಲ |
| ಇ) | ಹೊಸ ಪಿಂಚಣಿ (ಎನ್.ಪಿ.ಎಸ್.) ಯೋಜನೆ ರದ್ದುಪಡಿಸಿ ಹಳೇ ಪಿಂಚಣಿ ಯೋಜನೆಯನ್ನು ಜಾರಿಗೆ ತರುವುದಾಗಿ ಕಳೆದ ಅಧಿವೇಶನದಲ್ಲಿ ಸರ್ಕಾರ ಭರವಸೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಆದೇಶ ಸಂಖ್ಯೆ: ಆಇ-ಪಿಇಎನ್/89/2023, ದಿನಾಂಕ: 01.03.2023ರಲ್ಲಿ ರಾಜ್ಯದಲ್ಲಿ ಜಾರಿ ಇರುವ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ರದ್ದು ಪಡಿಸುವ ಸಂಬಂಧ ಈಗಾಗಲೇ ಹಳೆ ಪಿಂಚಣಿ ಯೋಜನೆಯನ್ನು ಮರು ಜಾರಿ ಮಾಡಿರುವ ರಾಜ್ಯಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಿರುವ ಕುರಿತು ಕೈಗೊಂಡಿರುವ ಕ್ರಮಗಳ ಬಗ್ಗೆ ಅಧ್ಯಯನ ನಡೆಸಿ ವರದಿ ಸಲ್ಲಿಸಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ ಆದೇಶಿಸಿದೆ. |
| ಈ | ಹಾಗಿದ್ದಲ್ಲಿ ಯಾವ ಕಾಲಮಿತಿಯೊಳಗೆ ಈ ಭರವಸೆಯನ್ನು ಜಾರಿಗೊಳಿಸಲಾಗುವುದು? | |

ಆಇ-ಪಿಇಎನ್/ 376 /2023

(ಸಿದ್ದರಾಮಯ್ಯ)
ಮುಖ್ಯಮಂತ್ರಿ